# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 727 (794) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಭೀಮರಾವ್ ಬಸವರಾಜ ಪಾಟೀಲ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 23.07.2024 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಹೊಸ ಕೈಗಾರಿಕೆಗಳ ಸ್ಥಾಪನೆಗೆ ಸರ್ಕಾರ ಕೈಗೊಂಡ ಕ್ರಮವೇನು; | ರಾಜ್ಯದಲ್ಲಿ ಬಂಡವಾಳ ಹೂಡಿಕೆಯನ್ನು ಉತ್ತೇಜಿಸಲು ಸರ್ಕಾರದ ಕ್ರಮಗಳು ಈ ಕೆಳಗಿನಂತಿದೆ.<br>• ದೇಶ ವಿದೇಶಗಳ ಹಲವಾರು ಪ್ರತಿಷ್ಠಿತ ಕಂಪನಿಗಳೊಂದಿಗೆ ಕರ್ನಾಟಕದಲ್ಲಿ ಬಂಡವಾಳ ಹೂಡಲು ಸರಣಿ ಸಭೆಗಳನ್ನುನಡೆಸಲಾಗುತ್ತಿದೆ.<br>• ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಭೂಮಿ ಖರೀದಿ ಪ್ರಕ್ರಿಯೆ ಸರಳೀಕರಣ ಗೊಳಿಸಲಾಗಿದೆ.<br>• ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಕೆಲವು ಮುಖ್ಯ ಎನ್.ಒ.ಸಿ/ ಒಪ್ಪಿಗೆಗಳನ್ನು ಸ್ವಯಂ ಘೋಷಣ ಪತ್ರದ ಆಧಾರದ ಮೇಲೆ ಪಡೆಯಲು ಮತ್ತು 3 ವರ್ಷಗಳವರೆಗೆ ವಿಸ್ತರಿಸಿ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ಅಧಿನಿಯಮ 2002 ಕ್ಕೆ ತಿದ್ದುಪಡಿತರಲಾಗಿದೆ.<br>• ಬೀದರ್ ಜಿಲ್ಲೆಯಲ್ಲಿ ಕೃಷಿ ಉಪಕರಣಗಳ ತಯಾರಿಕೆಗೆ ಕೈಗಾರಿಕಾ ಕ್ಲಸ್ಟರ್ ಗಳ ಅಭಿವೃದ್ಧಿಗೆ ಅನುಮೋದನೆನೀಡಲಾಗಿದೆ ಈ ಕ್ಲಸ್ಟರ್ ಗಳಲ್ಲಿ ಅನುಷ್ಠಾನಗೊಳ್ಳುವ ಕೈಗಾರಿಕೆಗಳಿಗೆ ವಿಶೇಷ ಪ್ರೋತ್ಸಾಹಧನ ಪ್ಯಾಕೇಜ್ ಗಳನ್ನು ನೀಡಿ ಉತ್ತೇಜಿಸಲಾಗುತ್ತದೆ.<br>• ಕೈಗಾರಿಕಾ ನೀತಿ 2020-25ನ್ನುಜಾರಿಗೆ ತರಲಾಗಿದೆ. ಅದರಂತೆ ಕಲ್ಯಾಣ ಕರ್ನಾಟಕ ಭಾಗದ ಬೀದರ್ ಜಿಲ್ಲೆಯನ್ನು ವಲಯ-1ರಡಿ ಪರಿಗಣಿಸಿದ್ದು, ಈ ಜಿಲ್ಲೆಯಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಕೆಳಕಂಡಂತೆ ರಿಯಾಯಿತಿ ಮತ್ತು ಪ್ರೋತ್ಸಾಹಗಳ ಉತ್ತೇಜನ ನೀಡಲಾಗುತ್ತಿದೆ.<br>➢ ಬಂಡವಾಳ ಹೂಡಿಕೆ ಸಹಾಯಧನ/ ವಹಿವಾಟು ಆಧಾರಿತ ಹೂಡಿಕೆ ಸಹಾಯಧನ.<br>➢ ಮುದ್ರಾಂಕ ಶುಲ್ಕ ವಿನಾಯಿತಿ ಹಾಗೂ ನೋಂದಣಿ ಶುಲ್ಕ ವಿನಾಯಿತಿ.<br>➢ ಭೂ ಪರಿವರ್ತನಾ ಶುಲ್ಕ ಮರುಪಾವತಿ. |

| | | |
|---|---|---|
| | | ➢ ವಿದ್ಯುತ್ ಶುಲ್ಕದ ಮೇಲಿನ ತೆರಿಗೆ ವಿನಾಯಿತಿ.<br>➢ ವಿದ್ಯುತ್ ಚ್ಛಕ್ತಿ ಸಹಾಯಧನ.<br>➢ ಇ.ಟಿ.ಪಿ ಸಹಾಯಧನ.<br>➢ ಅಂಕರ್ ಘಟಕ ಸಹಾಯಧನ. |
| ಆ | ಹೊಸ ಕೈಗಾರಿಕೆಗಳ ಸ್ಥಾಪನೆಗೆ ಸದರಿ ಜಿಲ್ಲೆಯಿಂದ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ; ಬಂದಿದ್ದಲ್ಲಿ ಮಾಹಿತಿ ನೀಡುವುದು? | ಬೀದರ್ ಜಿಲ್ಲೆಯಲ್ಲಿ ಕಳೆದ 10 ವರ್ಷಗಳಲ್ಲಿ (2013-14 ರಿಂದ 2023-24ನೇ ಸಾಲಿನವರೆಗೆ) ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿಯಲ್ಲಿ (SLSWCC) ಒಟ್ಟು 12 ಬಂಡವಾಳ ಹೂಡಿಕೆ ಯೋಜನೆಗಳಿಗೆ ಅನುಮೋದನೆಯನ್ನು ನೀಡಲಾಗಿದೆ.<br>ಈ ಯೋಜನೆಗಳಿಂದ ಒಟ್ಟು ರೂ. 932 ಕೋಟಿ ಬಂಡವಾಳ ಹೂಡಿಕೆಯಾಗಲಿದೆ ಹಾಗೂ 1,449 ಜನರಿಗೆ ಉದ್ಯೋಗ ಸೃಷ್ಟಿಯಾಗಲಿದೆ.<br>ವಿವರಗಳನ್ನು **ಅನುಬಂಧ-1** ರಲ್ಲಿ ಒದಗಿಸಿದೆ. |

ಸಿಐ 235 ಎಸ್‌ಪಿಐ 2024

**(ಎಂ.ಬಿ. ಪಾಟೀಲ)**

ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು

**LCQ -794** **Annexure -1**

**Abstract of approved projects in Bidar District from 2013-14 to 2023-24**

| Total Approved Projects | | | |
|---|---|---|---|
| **Year** | **No of projects** | **Investment (INR Cr)** | **Employment (Nos.)** |
| 2015-16 | 1 | 20.00 | 10 |
| 2016-17 | 2 | 109.46 | 149 |
| 2017-18 | 3 | 525.40 | 742 |
| 2019-20 | 2 | 32.11 | 125 |
| 2020-21 | 1 | 15.50 | 70 |
| 2021-22 | 3 | 229.72 | 353 |
| **Total** | **12** | **932.19** | **1449** |